146ನೇ ಅಧಿವೇಶನ ಕರ್ನಾಟಕ ವಿಧಾನ ಪರಿಷತ್ತು ಸಂಖ್ಯೆ: 72, 33+51

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಯು.ಬಿ. ವೆಂಕಟೇಶ್ ರವರು ನಿಯಮ-72ರಡಿ ಮಂಡಿಸಿರುವ ಸೂಚನೆಗೆ ಸರ್ಕಾರದ ಉತ್ತರ

ವಿಷಯ:

ಬೆಂಗಳೂರಿನ ಚಾಲುಕ್ಯ ವೃತ್ತದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಉದ್ದೇಶಿತ ಯೋಜನೆಯು ಮಂದಗತಿಯಲ್ಲಿ ಸಾಗಿರುವ ಕುರಿತು ನಿಯಮ 72ರ ಅಡಿ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ಬೆಂಗಳೂರು ನಗರದ ಚಾಲುಕ್ಯ ವೃತ್ತದಿಂದ ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಉದ್ದೇಶಿತ ಯೋಜನೆ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಬೆಂಗಳೂರು ನಗರದ ಚಾಲುಕ್ಯ ವೃತ್ತದಿಂದ ಅರಮನೆ ರಸ್ತೆ ಜಂಕ್ಷನ್ (ಬಿ.ಡಿ.ಎ ಮೇಲ್ಸೇತುವೆ) ವರೆಗಿನ ರಸ್ತೆ ಭಾಗದಲ್ಲಿ ಪ್ರಸ್ತುತ ಯಾವುದೇ ಅಭಿವೃದ್ಧಿ ಯೋಜನೆ ಪ್ರಸ್ತಾವನೆ ಇರುವುದಿಲ್ಲ.

ಮುಂದುವರೆದು, ಬೆಂಗಳೂರು ನಗರದ ಚಾಲುಕ್ಯ ವೃತ್ತದಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಬಳ್ಳಾರಿ ಮುಖ್ಯರಸ್ತೆಯಲ್ಲಿ **"ಚಾಲುಕ್ಯ ವೃತ್ತದಿಂದ ಹೆಬ್ಬಾಳ ಮೇಲುಸೇತುವೆ ವರೆಗಿನ ರಸ್ತೆ ಸರಪಳಿಯು"** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಟ್ಟಿದ್ದು, ಈ ಸರಪಳಿಯ ವ್ಯಾಪ್ತಿಯ ಪೈಕಿ **"ಬಿಡಿಎ ವೃತ್ತದಿಂದ ಮೇಖ್ರಿ ಸರ್ಕಲ್‌ವರೆಗಿನ"** ರಸ್ತೆಯನ್ನು ಪರಿಷ್ಕೃತ ಮಹಾನಕ್ಷೆ-2015ರನ್ವಯ 45.00ಮೀ ಅಗಲಕ್ಕೆ ಅಗಲೀಕರಣಗೊಳಿಸುವ ಯೋಜನೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ರೂಪಿಸಿ ಟೆಂಡರ್ ಪ್ರಕ್ರಿಯೆ ಕೈಗೊಂಡು ಸರ್ಕಾರದ ಅನುಮೋದನೆ ಪಡೆದು ದಿನಾಂಕ: 06.05.2020 ರಂದು ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಲಾಗಿರುತ್ತದೆ.

ಪ್ರಸ್ತುತ, ಬಿಡಿಎ ವೃತ್ತದಿಂದ ಮೇಖ್ರಿ ಸರ್ಕಲ್‌ವರೆಗಿನ ಬಳ್ಳಾರಿ ಮುಖ್ಯ ರಸ್ತೆಯನ್ನು ಪರಿಷ್ಕೃತ ಮಹಾನಕ್ಷೆ-2015ರ ಅನ್ವಯ 45.00 ಮೀ ಅಗಲಗೊಳಿಸಲು ರಸ್ತೆಯ ಪೂರ್ವ ಭಾಗಕ್ಕೆ ಬೆಂಗಳೂರು ಅರಮನೆ ಮೈದಾನದ ಜಾಗವು ಅವಶ್ಯವಿರುತ್ತದೆ. ಸದರಿ ಅರಮನೆ ಮೈದಾನದ ಜಾಗವನ್ನು ಭೂ-ಸ್ವಾಧೀನ ಪಡಿಸಿಕೊಂಡಿರುವ ಪ್ರಕರಣವು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಮುಂದೆ ಇರುವುದರಿಂದ, ಪ್ರಸ್ತುತ ರಸ್ತೆಯ ಪಶ್ಚಿಮ ಭಾಗದಲ್ಲಿ ಪಾದಚಾರಿ ಮಾರ್ಗ ನಿರ್ಮಾಣ ಕಾಮಗಾರಿಯನ್ನು ಮಾತ್ರ ಪ್ರಾರಂಭಿಸಲಾಗಿರುತ್ತದೆ.

ಮುಂದುವರೆದು, ಅರಮನೆ ಮೈದಾನದ ಜಾಗವನ್ನು ರಸ್ತೆ ಅಗಲೀಕರಣಕ್ಕೆ ಪಡೆದುಕೊಳ್ಳಲು ಸರ್ಕಾರದ ಮಟ್ಟದಲ್ಲಿ ಕ್ರಮಕೈಗೊಳ್ಳಲಾಗುತ್ತಿದ್ದು, ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪ್ರಕರಣದಲ್ಲಿ ನೀಡುವ ಅಂತಿಮ ಆದೇಶವನ್ನು ನಿರೀಕ್ಷಿಸಲಾಗುತ್ತಿದೆ. ಮಾನ್ಯ ನ್ಯಾಯಾಲಯವು ನೀಡುವ ಆದೇಶದನ್ವಯ ರಸ್ತೆ ಅಗಲೀಕರಣ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ.

ಮುಂದುವರೆದು, ಹೆಬ್ಬಾಳ ಮೇಲುಸೇತುವೆ ನಂತರದಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಬಳ್ಳಾರಿ ಮುಖ್ಯರಸ್ತೆಯ ಭಾಗವು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್.ಹೆಚ್.ಎ.ಐ) ರವರ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

ಸಂಖ್ಯೆ: ನಅಇ 59 ಎಂಎನ್‌ವೈ 2022 (ಇ)